# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1827 |
| ಸದಸ್ಯರ ಹೆಸರು | ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 24.03.2020. |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಸಚಿವರು |

| ಕ್ರ ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ. | ಚಿಕ್ಕಮಗಳೂರು ಜಿಲ್ಲೆಯಲ್ಲಿ ಅಭಿವೃದ್ಧಿ ಕೆಲಸಗಳಿಗೆ ಹಾಗೂ ಬಡವರು ನಿರ್ಮಿಸಿರುವ ಮನೆಗಳ ನಿರ್ಮಾಣಕ್ಕೆ ಜಲ್ಲಿ ಮರಳು ಕಲ್ಲು ದೊರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಚಿಕ್ಕಮಗಳೂರು ಜಿಲ್ಲಾ ವ್ಯಾಪ್ತಿಯಲ್ಲಿ 89 ಕಟ್ಟಡ ಕಲ್ಲಿನ ಗಣಿಗುತ್ತಿಗೆಗಳನ್ನು ಮಂಜೂರು ಮಾಡಲಾಗಿರುತ್ತದೆ. 30 ಜಲ್ಲಿ ಕ್ರಷರ್ ಘಟಕಗಳು ಹಾಗೂ 7 ಎಂ–ಸ್ಯಾಂಡ್ ಘಟಕಗಳು ಸೇರಿದಂತೆ ಒಟ್ಟು 37 ಕ್ರಷರ್ ಘಟಕಗಳಿಗೆ ಜಿಲ್ಲಾ ಕಲ್ಲುಪುಡಿ ಮಾಡುವ ಕ್ರಷರ್ ಘಟಕಗಳ ಲೈಸೆನ್ಸ್ ನೀಡಿಕೆ ಪ್ರಾಧಿಕಾರದಿಂದ ಅನುಮತಿ ನೀಡಲಾಗಿರುತ್ತದೆ.<br>ಮುಂದುವರೆದು, ನದಿ ಪಾತ್ರಗಳಲ್ಲಿ 6 ಮರಳು ಬ್ಲಾಕ್‌ಗಳನ್ನು ಟೆಂಡರ್ ಕಂ ಹರಾಜು ಮೂಲಕ ಮರಳು ಗುತ್ತಿಗೆಗಳನ್ನು ಮಂಜೂರು ಮಾಡಲಾಗಿರುತ್ತದೆ. ಒಂದು ಮರಳು ಬ್ಲಾಕನ್ನು ಸರ್ಕಾರಿ ಕಾಮಗಾರಿಗಳಿಗೆ ಮರಳು ಪೂರೈಕೆ ಮಾಡಲು ಲೋಕೋಪಯೋಗಿ ಇಲಾಖೆಗೆ ಮರಳು ಗುತ್ತಿಗೆಯನ್ನು ಮಂಜೂರು ಮಾಡಲಾಗಿರುತ್ತದೆ.<br>ಅಲ್ಲದೇ ಪ್ರವಾಹದಿಂದ ನದಿ ಪಕ್ಕದ ಕೃಷಿ ಜಮೀನುಗಳಲ್ಲಿ ಸಂಗ್ರಹವಾಗಿರುವ ಮರಳನ್ನು ತೆರವುಗೊಳಿಸಿ ಸದರಿ ಮರಳನ್ನು ಸರ್ಕಾರಿ, ಆಶ್ರಯ ಮನೆ, ದೇವಸ್ಥಾನ, ಮಸೀದಿ, ಮಂದಿರ ಹಾಗೂ ಇನ್ನಿತರ ಸ್ಥಳೀಯ ನಿರ್ಮಾಣ ಕಾಮಗಾರಿಗಳಿಗೆ ಬಳಸಿಕೊಳ್ಳಲು ಸರ್ಕಾರದಿಂದ ಅವಕಾಶ ಕಲ್ಪಿಸಲಾಗಿರುತ್ತದೆ. ಮುಂದುವರೆದು, ಚಿಕ್ಕಮಗಳೂರು ಜಿಲ್ಲೆಗೆ ನೆರೆಯ ಹಾಸನ ಜಿಲ್ಲೆಯ ಮರಳು ಗುತ್ತಿಗೆ ಪ್ರದೇಶಗಳಿಂದ ನದಿ ಮರಳು ಹಾಗೂ ಎಂ–ಸ್ಯಾಂಡ್ ಘಟಕಗಳಿಂದ ಉತ್ಪಾದಿತ ಮರಳು ಪೂರೈಕೆ ಆಗುತ್ತಿರುತ್ತದೆ. ಆದುದರಿಂದ ಜಿಲ್ಲಾ ವ್ಯಾಪ್ತಿಯಲ್ಲಿ ಜಲ್ಲಿ ಕಲ್ಲು ಮತ್ತು ಮರಳಿನ ಸಮಸ್ಯೆ ಇರುವುದು ಕಂಡು ಬಂದಿರುವುದಿಲ್ಲ. |

| | | |
|---|---|---|
| ಆ. | ಬಂದಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು: (ವಿವರ ನೀಡುವುದು) | ಚಿಕ್ಕಮಗಳೂರು ಜಿಲ್ಲೆಯ ವ್ಯಾಪ್ತಿಯಲ್ಲಿ ಮಂಜೂರಾಗಿರುವ ಕಟ್ಟಡ ಕಲ್ಲು ಗಣಿ ಗುತ್ತಿಗೆ ಪ್ರದೇಶಗಳಿಂದ 2019-20ನೇ ಸಾಲಿನಲ್ಲಿ ಇಲ್ಲಿಯವರೆಗೆ 12,61,376 ಮೆಟ್ರಿಕ್ ಟನ್ ಕಟ್ಟಡ ಕಲ್ಲನ್ನು ಉತ್ಪಾದಿಸಿ ಜಿಲ್ಲೆಯ ಸಾರ್ವಜನಿಕ ಹಾಗೂ ಸರ್ಕಾರಿ ಕಾಮಗಾರಿಗಳಿಗೆ ಪೂರೈಸಲಾಗಿರುತ್ತದೆ.<br>ಮುಂದುವರೆದು, ಜಿಲ್ಲೆಯಲ್ಲಿ ಚಾಲ್ತಿಯಲ್ಲಿರುವ ಮರಳು ಗಣಿ ಗುತ್ತಿಗೆ ಪ್ರದೇಶಗಳಿಂದ 2019-20ನೇ ಸಾಲಿನ ಜನವರಿ ಅಂತ್ಯದವರೆಗೆ 65,424 ಮೆಟ್ರಿಕ್ ಟನ್ ಮರಳು ಹಾಗೂ ಎಂ-ಸ್ಯಾಂಡ್ ಘಟಕಗಳಿಂದ 3,12,021 ಮೆಟ್ರಿಕ್ ಟನ್ ಎಂ-ಸ್ಯಾಂಡ್ ಪೂರೈಸಲಾಗಿರುತ್ತದೆ. ಪ್ರವಾಹದಿಂದ ನದಿ ಪಕ್ಕದ ಕೃಷಿ ಜಮೀನುಗಳಲ್ಲಿ ಸಂಗ್ರಹವಾಗಿರುವ 6,124 ಮೆಟ್ರಿಕ್ ಟನ್ ಮರಳನ್ನು ತೆರವುಗೊಳಿಸಿ ಜಿಲ್ಲೆ ಅಬಿವೃದ್ಧಿ ಕಾಮಗಾರಿಗಳಿಗೆ ಪೂರೈಕೆ ಮಾಡಲಾಗಿರುತ್ತದೆ. |
| ಇ. | ಮರಳು ಬದಲಾಗಿ ಎಂ-ಸ್ಯಾಂಡ್ ಉಪಯೋಗಿಸಲು ಸರ್ಕಾರದಿಂದ ಕ್ರಮ ಕೈಗೊಳ್ಳಲಾಗಿದೆಯೇ; | ನದಿ ಮರಳಿಗೆ ಪರ್ಯಾಯವಾಗಿ ಎಂ-ಸ್ಯಾಂಡ್ ಉತ್ಪಾದನೆ ಹಾಗೂ ಬಳಸವ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಸರ್ಕಾರದಿಂದ ಕ್ರಮ ಕೈಗೊಳ್ಳಲಾಗಿರುತ್ತದೆ. |
| ಈ. | ಹಾಗಿದ್ದಲ್ಲಿ, ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ? | ಸರ್ಕಾರವು ನದಿ ಮರಳಿಗೆ ಪರ್ಯಾಯವಾಗಿ ಎಂ-ಸ್ಯಾಂಡ್ ಉತ್ಪಾದನೆ ಮತ್ತು ಬಳಕೆಯನ್ನು ಪ್ರೋತ್ಸಾಹಿಸುತ್ತಿದ್ದು, ಈ ಕೆಳಗಿನಂತೆ ಕ್ರಮವಹಿಸಲಾಗಿರುತ್ತದೆ.<br>• ಕೆ.ಎಂ.ಎಂ.ಸಿ.ಆರ್ (ತಿದ್ದುಪಡಿ) ನಿಯಮಗಳು, 2016 ನಿಯಮ 15ರಂತೆ ಎಂ-ಸ್ಯಾಂಡ್ ಘಟಕ ಸ್ಥಾಪಿಸುವವರಿಗೆ ಗರಿಷ್ಠ 50-00ಎಕರೆ ವಿಸ್ತೀರ್ಣದವರೆಗೆ ಕಲ್ಲುಗಣಿ ಗುತ್ತಿಗೆಯನ್ನು ಮಂಜೂರು ಮಾಡಲು ನಿಯಮಾವಳಿ ರೂಪಿಸಲಾಗಿದೆ.<br>• ಕೆ.ಎಂ.ಎಂ.ಸಿ.ಆರ್ (ತಿದ್ದುಪಡಿ) ನಿಯಮಗಳು, 2016 ನಿಯಮ 8A ರಂತೆ ಎಂ-ಸ್ಯಾಂಡ್ ತಯಾರಿಸುವ ಉದ್ದೇಶಕ್ಕಾಗಿ 30 ವರ್ಷಗಳ ಅವಧಿಗೆ ಕಲ್ಲುಗಣಿ ಗುತ್ತಿಗೆ ಮಂಜೂರು ಮಾಡಲು ನಿಯಮಾವಳಿ ರೂಪಿಸಲಾಗಿದೆ.<br>• ಕೆ.ಎಂ.ಎಂ.ಸಿ.ಆರ್ (ತಿದ್ದುಪಡಿ) ನಿಯಮಗಳು, 2016 ನಿಯಮ 31-ZC ರಂತೆ ತಿದ್ದುಪಡಿ ನಿಯಮಗಳು, 2016 ಜಾರಿಯಾಗುವ ಪೂರ್ವದಲ್ಲಿ ಕೆ.ಎಂ.ಎಂ.ಸಿ.ಆರ್ 1994ರ ನಿಯಮ 8(5)ರಂತೆ ಕಂದಾಯ ಮತ್ತು ಅರಣ್ಯ ಇಲಾಖೆಯ ನಿರಾಕ್ಷೇಪಣಾ ಪತ್ರ ಸ್ವೀಕೃತವಾಗಿದ್ದಲ್ಲಿ ಅಂತಹ |

| | | |
|---|---|---|
| | | ಅರ್ಜಿಗಳ ಪ್ರದೇಶಗಳಲ್ಲಿ ತಿದ್ದುಪಡಿ ಪೂರ್ವ ಚಾಲ್ತಿಯಲ್ಲಿದ್ದ ನಿಯಮಾವಳಿಯಂತೆ ಗುತ್ತಿಗೆ ಮಂಜೂರು ಮಾಡಲು ಅವಕಾಶ ಕಲ್ಪಿಸಿದೆ.<br>• ಎಂ-ಸ್ಯಾಂಡ್ ಬಳಕೆ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಇಲಾಖೆಯಿಂದ ಆಕಾಶವಾಣಿ, ಬೆಂಗಳೂರು ರವರ ಮೂಲಕ ಜಿಂಗಲ್ಸ್‌ಗಳ ಪ್ರಸಾರ, ಸಂದರ್ಶನ ಕಾರ್ಯಕ್ರಮ, ಫೋನ್ ಇನ್ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಇದಲ್ಲದೆ ಪೋಸ್ಟರ್ಸ್, ಕರಪತ್ರ, ಪ್ಲೆಕ್ಸ್ ಗಳನ್ನು ಮುದ್ರಿಸಿ ಎಂ-ಸ್ಯಾಂಡ್ ಉಪಯೋಗಗಳ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸುವ ಕಾರ್ಯಕ್ರಮ ಆಯೋಜಿಸಲಾಗಿರುತ್ತಿದೆ.<br>• ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದಪಡಿ) ನಿಯಮಗಳು, 2016 ರಲ್ಲಿ ನಿಯಮ 31-ZC ಎಂಬ ವಿಶೇಷ ನಿಯಮ ಜಾರಿಗೆ ತಂದು ದಿನಾಂಕ 12.08.2016 ರ ಪೂರ್ವದಲ್ಲಿ ಎಂ-ಸ್ಯಾಂಡ್ ತಯಾರಿಸಿ ಘಟಕದವರಿಗೆ ಎಂ-ಸ್ಯಾಂಡ್ ಉತ್ಪಾದನೆ ದ್ವಿಗುಣಗೊಳಿಸಲು ಹರಾಜು ರಹಿತವಾಗಿ ಕಲ್ಲು ಗಣಿಗುತ್ತಿಗೆ ಮಂಜೂರಾತಿಗೆ ಕ್ರಮ ವಹಿಸಲಾಗಿರುತ್ತದೆ. |

ಸಂಖ್ಯೆ: ಸಿಐ 196 ಎಂಎಂಎನ್ 2020

(ಸಿ.ಸಿ. ಪಾಟೀಲ)
ಗಣಿ ಮತ್ತು ಭೂವಿಜ್ಞಾನ ಸಚಿವರು.